## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 77 |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 15.07.2024 |
| ಉತ್ತರಿಸುವ ಸಚಿವರು | : | ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯಿಂದ ಬಿ.ಪಿ.ಎಲ್. ಪಡಿತರ ಚೀಟಿ ಪಡೆದ ಫಲಾನುಭವಿಗಳೆಷ್ಟು; ಕಳೆದ ಮೂರು ವರ್ಷಗಳಲ್ಲಿ ಹೊಸದಾಗಿ ಬಿಪಿಎಲ್ ಪಡಿತರ ಚೀಟಿ ಪಡೆದ ಫಲಾನುಭವಿಗಳೆಷ್ಟು; (ವಿವರ ನೀಡುವುದು)</td><td>ರಾಜ್ಯದಲ್ಲಿ ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಗಳ ವಿವರಗಳು ಈ ಕೆಳಕಂಡಂತಿವೆ:-<br><table><tr><th>ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿ</th><th>ಆದ್ಯತಾ ಪಡಿತರ ಚೀಟಿ</th><th>ಒಟ್ಟು</th></tr><tr><td>10,84,009</td><td>1,16,52,660</td><td>1,27,36,669</td></tr></table><br>2021ನೇ ಸಾಲಿನಿಂದ ಇಲ್ಲಿಯವರೆಗೆ ಹೊಸದಾಗಿ ವಿತರಿಸಲಾಗುವ ಆದ್ಯತಾ ಆದ್ಯತಾ ಪಡಿತರ ಚೀಟಿಗಳ ಒಟ್ಟು ಸಂಖ್ಯೆ 4,37,252.</td></tr>
<tr><td>ಆ</td><td>ಬಿಪಿಎಲ್ ಪಡಿತರ ಚೀಟಿ ಪಡೆಯಲು ನಿಗಧಿಪಡಿಸಿರುವ ಮಾನದಂಡವೇನು; ಹೊಸ ಪಡಿತರ ಚೀಟಿ ವಿತರಣೆ ಸ್ಥಗಿತಗೊಳಿಸಲು ಕಾರಣ ಏನು; ಇದರಿಂದ ಹೊಸದಾಗಿ ಪಡಿತರ ಚೀಟಿ ಪಡೆದು ಗೃಹಲಕ್ಷ್ಮೀ ಯೋಜನೆಗೆ ಹೆಸರು ನೋಂದಾಯಿಸುವ ಬಡ ಕುಟುಂಬಗಳಿಗೆ ತೊಂದರೆಯಾಗುವುದಿಲ್ಲವೆ; ಹೊಸ ಪಡಿತರ ಚೀಟಿ ವಿತರಿಸುವ ಕಾರ್ಯವನ್ನು ಯಾವಾಗ ಪ್ರಾರಂಭಿಸಲಾಗುವುದು; (ಮಾಹಿತಿ ನೀಡುವುದು)</td><td>ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಈ ಕೆಳಕಂಡ (ಅನರ್ಹತೆಯನ್ನಾಧರಿಸಿ ಹೊರಗಿಡುವ) ಮಾನದಂಡಗಳನ್ನು ಜಾರಿಯಲ್ಲಿರುತ್ತವೆ.<br>1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ನಿಗಮಗಳು/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ವ್ಯಾಟ್/ವೃತ್ತಿ</td></tr>
</table>

| | | |
|---|---|---|
| | | ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br><br>2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>4. ಕುಟುಂಬದ ವಾರ್ಷಿಕ ಆದಾಯವು ರೂ.1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br>ಮೇಲಿನ ಮಾನದಂಡಗಳನ್ವಯ ರಾಜ್ಯದ ಎಲ್ಲಾ ಅರ್ಹ ಫಲಾನುಭವಿಗಳಿಗೆ ಆದ್ಯತಾ ಪಡಿತರ (BPL) ಚೀಟಿಗಳನ್ನು ಕೋರಿ ಸಲ್ಲಿಸಿರುವ ಅರ್ಜಿಗಳ ವಿಲೇವಾರಿಗೆ ಕ್ರಮ ವಹಿಸಲಾಗಿರುತ್ತದೆ.<br>ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್‌ಎ 2021, ದಿನಾಂಕ: 29.09.2023 ರಲ್ಲಿ 2,95,986 ಅರ್ಜಿಗಳ ವಿಲೇವಾರಿ ಬಗ್ಗೆ ಆದೇಶಿಸಲಾಗಿರುತ್ತದೆ. ಇದರಲ್ಲಿ 62,595 ಅರ್ಜಿಗಳನ್ನು ಅನುಮೋದಿಸಿದ್ದು, 4,679 ಅರ್ಜಿಗಳನ್ನು ತಿರಸ್ಕರಿಸಲಾಗಿರುತ್ತದೆ ಬಾಕಿ ಇರುವ 2,28,712 ಅರ್ಜಿಗಳ ಕುರಿತು ಸ್ಥಳ ಪರಿಶೀಲನೆ ಮಾಡಿ ತ್ವರಿತವಾಗಿ ವಿಲೇವಾರಿ ಮಾಡಲು ರಾಜ್ಯದ ಜಂಟಿ/ ಉಪ ನಿರ್ದೇಶಕರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಇವರಿಗೆ ನಿರ್ದೇಶನ ನೀಡಲಾಗಿರುತ್ತದೆ. |

| | | |
|---|---|---|
| ೩ | ಪ್ರಸ್ತುತ ಪಡಿತರ ಚೀಟಿಯಲ್ಲಿ ಹೆಸರಿರುವ ಪ್ರತಿ ವ್ಯಕ್ತಿಗೆ ವಿತರಿಸುತ್ತಿರುವ ಅಕ್ಕಿಯ ಪ್ರಮಾಣ ಎಷ್ಟು; ಅದರಲ್ಲಿ ಕೇಂದ್ರ ಮತ್ತು ರಾಜ್ಯದ ಪಾಲು ಎಷ್ಟು; ಪ್ರತ್ಯೇಕವಾಗಿ ಮಾಹಿತಿ ನೀಡುವುದು; ಅಕ್ಕಿಯ ಬದಲಾಗಿ ಪ್ರತಿ ವ್ಯಕ್ತಿಯ ಬ್ಯಾಂಕ್ ಖಾತೆಗೆ ಎಷ್ಟು ತಿಂಗಳ ಹಣ ಜಮಾ ಮಾಡಲಾಗಿದೆ; ಇದಕ್ಕೆ ಖರ್ಚಾದ ಹಣ ಎಷ್ಟು; ಯಾವ ಯಾವ ತಿಂಗಳ ಹಣ ಬಾಕಿ ಉಳಿದಿದೆ? (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು) | ಕೇಂದ್ರ ಮತ್ತು ರಾಜ್ಯ ವ್ಯಾಪ್ತಿಯ ಆದ್ಯತಾ ಪಡಿತರ ಚೀಟಿಯಲ್ಲಿನ ಪ್ರತಿ ವ್ಯಕ್ತಿಗೆ 5 ಕೆ.ಜಿ. ಆಹಾರಧಾನ್ಯ ವಿತರಿಸಲಾಗುತ್ತಿದ್ದು, ಪ್ರತಿ ಪಡಿತರ ಚೀಟಿಯ ಫಲಾನುಭವಿಗಳಿಗೆ 03 ಕೆ.ಜಿ ಅಕ್ಕಿ ಮತ್ತು ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಲಾಗುವ ರಾಗಿ/ಜೋಳವನ್ನು ಲಭ್ಯತೆಗನುಗುಣವಾಗಿ ಆಯಾ ಪ್ರದೇಶದ ಆಹಾರ ಪದ್ಧತಿಯಂತೆ 02 ಕೆ.ಜಿ ಸೇರಿದಂತೆ ಒಟ್ಟು 05 ಕೆ.ಜಿ ಆಹಾರಧಾನ್ಯ ವಿತರಿಸಲಾಗುತ್ತಿದೆ.<br><br>ಕೇಂದ್ರ ವ್ಯಾಪ್ತಿಯ ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿದಾರರಿಗೆ ಪ್ರತಿ ಪಡಿತರ ಚೀಟಿಗೆ 35 ಕೆ.ಜಿ. ಆಹಾರಧಾನ್ಯ ವಿತರಣೆ ಮಾಡಲಾಗುತ್ತಿದೆ. ಕೇಂದ್ರ ವ್ಯಾಪ್ತಿಯ ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿದಾರರಿಗೆ ವಿತರಣೆ ಮಾಡಲು 2,17,403 ಎಂ.ಟಿ ಆಹಾರಧಾನ್ಯವನ್ನು ಕೇಂದ್ರ ಸರ್ಕಾರದಿಂದ ಉಚಿತವಾಗಿ ಬಿಡುಗಡೆ ಮಾಡಲಾಗುತ್ತಿದೆ.<br><br>ಸದರಿ ಪ್ರಮಾಣದ ವಿತರಣೆಗಾಗಿ ತಗಲುವ ಚಿಲ್ಲರೆ ಲಾಭಾಂಶ ಮತ್ತು ಸಾಗಾಣಿಕೆಯ ಒಟ್ಟು ವೆಚ್ಚದ ಪೈಕಿ, ಕೇಂದ್ರ ಸರ್ಕಾರ ನಿಗಧಿಪಡಿಸಿರುವ ಪ್ರತಿ ಕ್ವಿಂಟಲ್ ಗರಿಷ್ಟ ದರದ ಶೇಕಡ 50 ರಷ್ಟು ಮೊತ್ತವನ್ನು ಕೇಂದ್ರ ಸರ್ಕಾರವು ರಾಜ್ಯಕ್ಕೆ ಮರುಪಾವತಿಸುತ್ತದೆ.<br><br>ರಾಜ್ಯ ವ್ಯಾಪ್ತಿಯ ಆದ್ಯತಾ ಪಡಿತರ ಚೀಟಿ ಫಲಾನುಭವಿಗಳಿಗೆ ಪ್ರತಿ ಮಾಹೆ ಅಗತ್ಯವಿರುವ 20000 ಎಂ.ಟಿ ಅಕ್ಕಿ ಪ್ರಮಾಣವನ್ನು ಪ್ರತಿ ಕೆ.ಜಿ ದರ ರೂ.34.60 ರಂತೆ ಕೇಂದ್ರದ ಸಂಸ್ಥೆಗಳಾದ ನಾಫೆಡ್, ಎನ್ ಸಿ ಸಿಎಫ್ ಮತ್ತು ಕೇಂದ್ರೀಯ ಭಂಡಾರ್ ಸಂಸ್ಥೆಗಳಿಂದ ಖರೀದಿಸಲಾಗುತ್ತಿದೆ. ಇದಕ್ಕೆ ತಗಲುವ ಸಂಪೂರ್ಣ ವೆಚ್ಚವನ್ನು ರಾಜ್ಯ ಸರ್ಕಾರದ ವತಿಯಿಂದ ಭರಿಸಲಾಗುತ್ತಿದೆ. |

ಕರ್ನಾಟಕ ರಾಜ್ಯದಲ್ಲಿರುವ ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಗಳ ಪ್ರತಿ ಫಲಾನುಭವಿಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯನ್ವಯ ವಿತರಿಸಲಾಗುವ 5 ಕೆ.ಜಿ ಆಹಾರಧಾನ್ಯದೊಂದಿಗೆ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿಯಾಗಿ 5 ಕೆ. ಜಿ ಆಹಾರಧಾನ್ಯವನ್ನು ಸೇರಿಸಿ ಉಚಿತವಾಗಿ ವಿತರಿಸಲು ನಿರ್ಧರಿಸಲಾಗಿದ್ದು, ಅಕ್ಕಿಯ ಅಲಭ್ಯತೆಯಿಂದಾಗಿ ಅಕ್ಕಿಯ ಬದಲಾಗಿ ಪ್ರತಿ ಕೆ. ಜಿ ರೂ. 34/- ರಂತೆ 5 ಕೆ.ಜಿ ಗೆ ರೂ. 170/- ರಂತೆ ಪ್ರತಿ ಸದಸ್ಯರಿಗೆ ಅವರ ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ನೇರ ಹಣ ವರ್ಗಾವಣೆ (DBT) ಮುಖಾಂತರ ವರ್ಗಾಯಿಸಲಾಗುತ್ತಿದೆ.

ಜುಲೈ–2023 ರಿಂದ ಮೇ-2024ರ ವರೆಗೆ, ಅರ್ಹ ಫಲಾನುಭವಿಗಳಿಗೆ ಡಿಬಿಟಿ (DBT) ಮೂಲಕ ವರ್ಗಾಯಿಸಲಾಗುವ ಮಾಹೆವಾರು ವಿವರ ಈ ಕೆಳಗಿನಂತಿದೆ.

| ಕ್ರ.ಸಂ | ಮಾಹೆ | ಫಲಾನುಭವಿಗಳ ಸಂಖ್ಯೆ | ವರ್ಗಾಯಿಲಾದ ಒಟ್ಟು ಮೊತ್ತ (ಕೋಟಿಗಳಲ್ಲಿ) |
|---|---|---|---|
| 1 | ಜುಲೈ-2023 | 3,45,38,958 | 566.05 |
| 2 | ಆಗಸ್ಟ್-2023 | 3,69,36,906 | 605.88 |
| 3 | ಸೆಪ್ಟೆಂಬರ್-2023 | 38262103 | 627.73 |
| 4 | ಅಕ್ಟೋಬರ್-2023 | 39274053 | 644.45 |
| 5 | ನವೆಂಬರ್-2023 | 39714391 | 651.73 |
| 6 | ಡಿಸೆಂಬರ್-2023 | 39925249 | 655.22 |

| | | | |
|---|---|---|---|
| 7 | ಜನವರಿ-2024 | 40243966 | 660.5 |
| 8 | ಫೆಬ್ರುವರಿ-2024 | 4,08,87,361 | 671.13 |
| 9 | ಮಾರ್ಚ್-2024 | 4,09,34,896 | 671.91 |
| 10 | ಏಪ್ರಿಲ್-2024 | 4,07,55,079 | 666.96 |
| 11 | ಮೇ-2024 | 4,07,76,390 | 666.31 ಪ್ರಗತಿಯಲ್ಲಿರುತ್ತದೆ |

ಜುಲೈ-2023 ರಿಂದ ಏಪ್ರಿಲ್-2024 ರವರೆಗೆ ಅರ್ಹ ಫಲಾನುಭವಿಗಳಿಗೆ ಹಣವನ್ನು ಸಂಪೂರ್ಣವಾಗಿ ವರ್ಗಾಯಿಸಲಾಗಿದೆ.

ಆನಾಸ 190 ಡಿಆರ್ಎ 2024

(ಕೆ.ಹೆಚ್. ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು